## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 630 |
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ್ ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12-03-2025 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೀದರ ಜಿಲ್ಲೆಯ ಬೀದರ್ ಪಟ್ಟಣದಲ್ಲಿ ಸಾಕಷ್ಟು ಅಧಿಕ ವಾಹನಗಳು ಓಡಾಡುತ್ತಿರುವುದರಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಬೀದರ ಪಟ್ಟಣದಲ್ಲಿ ಅಧಿಕ ವಾಹನಗಳು ಓಡಾಡುತ್ತಿರುವುದರಿಂದ ಸಂಚಾರ ದಟ್ಟಣೆ ಅಧಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಬೀದರ್ ಹೊರ ವರ್ತುಲ ರಸ್ತೆ ನಿರ್ಮಾಣವನ್ನು 36 ಕಿ.ಮೀ. ಉದ್ದಕ್ಕೆ KKRDB ಅನುದಾನದಲ್ಲಿ ಕೈಗೊಳ್ಳಲು ಪ್ರಸ್ತಾಪಿಸಿದ್ದು, ಇದರಲ್ಲಿ ಈಗಾಗಲೇ 17.80 ಕಿ.ಮೀ. ಉದ್ದವನ್ನು ಪೂರ್ಣಗೊಳಿಸಲಾಗಿದೆ. ಬಾಕಿ ಕಿ.ಮೀ.3.00 ರಿಂದ 4.31 ವರೆಗೆ (1.31 ಕಿ.ಮೀ) ರೂ:999.00 ಲಕ್ಷ ಮೊತ್ತದ ಹೊರ ವರ್ತುಲ ರಸ್ತೆ ಕಾಮಗಾರಿ ಪ್ರಗತಿಯಲ್ಲಿದ್ದು, 3 ತಿಂಗಳಲ್ಲಿ ಪೂರ್ಣಗೊಳ್ಳುತ್ತದೆ. ಮುಂದುವರೆದ ಅಲಿಯಾಬಾದ್‌ದಿಂದ ನೌಬಾದ್‌ವರೆಗೆ ಕಿ.ಮೀ.4.31 ರಿಂದ 5.20 ರವರೆಗಿನ ಹೊರ ವರ್ತುಲ ರಸ್ತೆ ನಿರ್ಮಾಣವನ್ನು ರೂ.990.00 ಲಕ್ಷಗಳು ಮೊತ್ತದಲ್ಲಿ ಕೈಗೊಳ್ಳಲು KKRDB ಯೋಜನೆ ಅಡಿಯಲ್ಲಿ ಅನುಮೋದನೆಯಾಗಿರುತ್ತದೆ. ಸದರಿ ಕಾಮಗಾರಿಗೆ ದಿನಾಂಕ:03.03.2025 ರಂದು ಟೆಂಡರ್ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿದೆ. ಕಾರ್ಯಾದೇಶ ನೀಡಿದ ನಂತರ 9 ತಿಂಗಳ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.<br><br>ಉಳಿದ 16 ಕಿ.ಮೀ. ಉದ್ದವನ್ನು KKRDB ಯಿಂದ ಅನುದಾನ ಬಿಡುಗಡೆಗೊಳಿಸಿ ಆಡಳಿತಾತ್ಮಕ ಅನುಮೋದನೆ ನೀಡಿದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. |
| ಆ) | ಬೀದರ್ ಹೊರ ವರ್ತುಲ ರಸ್ತೆ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | |
| ಇ) | ಸರ್ಕಾರವು ಯಾವ ಕಾಲಮಿತಿಯಲ್ಲಿ ಹೊರ ವರ್ತುಲ ರಸ್ತೆ ಕಾಮಗಾರಿ ಕೈಗೊಳ್ಳುವುದು? | |

ಸಂಖ್ಯೆ: ಲೋಇ 43 ಸಿಐಎಸ್ 2025 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು